ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ		748 (822)	
ಸದಸ್ಯರ ಹೆಸರು		ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ)	
ಉತ್ತರಿಸಬೇಕಾದ ದಿನಾಂಕ		20.09.2021	
ಉತ್ತರಿಸಬೇಕಾದ ಸಚಿವರು		ಉನ್ನತ ಶಿಕ್ಷಣ ಸಚಿವರು	
ಪ್ರಶ್ನೆ		ಉತ್ತರ	
(ಅ)	ಕರ್ನಾಟಕದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು;	ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ: 440	
(ಆ)	ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರುಗಳ ಹುದ್ದೆಗಳ ಸಂಖ್ಯೆ ಎಷ್ಟು;	ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ: 1690	
(ಇ)	ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು?	ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಅಂತಿಮ ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019 (ಭಾಗ-3), ದಿನಾಂಕ: 08.07.2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ: 19.10.2020 ರಲ್ಲಿ ಪ್ರಕಟಿಸಲಾಗಿದೆ. ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019, ದಿನಾಂಕ: 26.08.2021ರಂದು ಹೊರಡಿಸಲಾಗಿದೆ.	

ಇಡಿ 165 ಡಿಸಿಇ 2021

(ಡಾ.ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ ಸಚಿವರು